# ಮೀನಿನ ಆಹಾರ ಅಪೌಷ್ಟಿಕತೆ ಹೋಗಲಾಡಿಸುವ ಅತ್ಯುತ್ತಮ ಪೋಷಕಾಂಶವಾಗಿದೆ: ಉಪೇಂದ್ರ ಪ್ರತಾಪ್ ಸಿಂಗ್




**ದೇವನಹಳ್ಳಿ :** ಮೀನು ಸೇವನೆಯನ್ನು ಉತ್ತೇಜಿಸಲು ಮತ್ತು ಅಪೌಷ್ಟಿಕತೆಯನ್ನು ತಡೆಯಲು ಸರ್ಕಾರ ಮತ್ತು ವಿವಿಧ ಸಂಸ್ಥೆಗಳು ನಿರಂತರವಾಗಿ ಜಾಗೃತಿ ಕಾಯ ರ್ಕ್ರಮಗಳನ್ನು ನಡೆಸುತ್ತಿದೆ, ಮೀನು ಸೇವನೆಯು ರೋಗ ನಿರೋಧಕ ಶಕ್ತಿಯನ್ನು ಹೊಂದಿದೆ. ಕಣ್ಣಿನ ದೃಷ್ಟಿ ವೃದ್ಧಿಸಲು ಮತ್ತು ಮೂಳೆಗಳು ಬಲಗೊಳ್ಳಲು ಇದು ಸಹಕಾರಿ. ವಿಶೇಷವಾಗಿ ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳಲ್ಲಿ ರಕ್ತಹೀನತೆ ಮತ್ತು ಅಪೌಷ್ಟಿಕತೆ ಹೋಗಲಾಡಿಸಲು ಮೀನಿನ ಆಹಾರ ಅತ್ಯುತ್ತಮ ಪೋಷಕಾಂಶವಾಗಿದೆ ಎಂದು ಜಲಾನಯನ ಇಲಾಖೆ ಆಯುಕ್ತರಾದ ಉಪೇಂದ್ರ ಪ್ರತಾಪ್ ಸಿಂಗ್ ತಿಳಿಸಿದರು.

ದೇವನಹಳ್ಳಿ ತಾಲೂಕಿನ ಕೆರೆಯ ಅಂಗಳ ದಲ್ಲಿ ಮೀನುಗಾರಿಕೆ ಇಲಾಖೆಯಡಿ ಯಲ್ಲಿ ತಿಲಾಪಿಯ ಮೀನು ರೈತ ಉತ್ಪಾದಕರ ಸಂಸ್ಥೆಯ ವತಿಯಿಂದ ಮೀನುಗಾರಿಕೆ ಉದ್ಯಮ ಮತ್ತು ಮೀನಿನ ಅಹಾರದಿಂದ ದೊರೆಯುವ ಪೌಷ್ಟಿಕಾಂಶಗಳ ಕುರಿತು ಅರಿವು ಮೂಡಿಸುವ "ಪ್ಲೇವರ್ಸ್ ಆಫ್ ವಾಟರ್ ಕಾರ್ಯಕ್ರಮ "ದಲ್ಲಿ ಮಾತನಾಡಿದರು.


ಕೋಟ್ಯಾಂತರ ಲಕ್ಷ ವೆಚ್ಚದಲ್ಲಿ ಮೀನುಗಾರಿಕೆ ಉದ್ಯಮ ನಡೆಯುತ್ತಿದ್ದು ಹಾಗಾಗಿ ಹೈನುಗಾರಿಕೆ ಜೊತೆ ಜೂತೆಯಲ್ಲಿ ಮೀನುಗಾರಿಕೆ ಒಂದು ಭಾಗವಾಗಿ ಮಾಡಿಕೊಳ್ಳಿ, ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಮೀನಿಗಾರಿಕೆ ಪ್ರೋತ್ಸಾಹಿಸುವ ಸಲುವಾಗಿ ಸೊಸೈಟಿಗಳು ಇವೆ, ಜಲಾಶಯ ಗಳನ್ನು ಸಂರಕ್ಷಿಸಿ,ಮೀನುಗಾರಿಕೆ ಮಳಿಗೆಗಳನ್ನು ಸ್ಥಪಿಸಿ ಆದಾಯವನ್ನು ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಜಲಾನಯನ ಇಲಾಖೆಯ ನಿದೇಶಕ ರಾದ ಮೊಹಮದ್ ಪರ್ವೆಜ್ ಬಂತನಾಲ್ ಮಾತನಾಡಿ ಮೀನು ಸಾಕಾಣೆ ಮಾಡುವವರಿಗೆ ಇಲಾಖೆಯಿಂದ ಅನೇಕ ಸೌಲಭ್ಯ ಹಾಗೂ ತರಬೇತಿ ಕಾಯಕ್ರಮಗಳಿದ್ದು ಮೀನು ಸಾಕಾಣೆ ಮಾಡುವವರು ಇದರ ಸುದುಪಯೋಗ ಪಡೆದು ತಮ್ಮ ಜಮೀನುಗಳಲ್ಲಿ ಹೊಂಡಗಳಲ್ಲಿ ಮೀನುಗಳನ್ನು ಸಾಕಾಣೆ ಮಾಡು ಉತ್ತಮ ಲಾಭಗಳಿಸಬಹುದು ಹಾಗೂ ನಿವೇ ಸ್ವತಹ ಮಾರುಕಟ್ಟೆಯನ್ನು ಸಹ ನಿರ್ಮಾಣ ಮಾಡಬಹುದಾಗಿದೆ ದೇವನಹಳ್ಳಿ ಯಲ್ಲಿ ವಿಮಾನ ನಿಲ್ದಾಣವಾದ ಮೇಲೆ ಜನಸಂಖ್ಯೆ ಹೆಚ್ಚಾಗಿದ್ದು ದೇಶ ವಿದೇಶಗಳಿಂದ ಜನ ಆಗಮಿಸುತ್ತಾರೆ ಅಂತಹ ಜನದಟ್ಟಣೆ ಇರುವ ಕಡೆ ರೈತರೇ ಅಂಗಡಿಗಳನ್ನು ತೆರೆದು ಮಾರಾಟ ಮಳಿಗೆಗಳನ್ನು ಪ್ರಾರಂಭಿಸಿದರೆ ಉತ್ತಮ ಲಾಭಗಳಿಸಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಪ್ರತಿಯೊಬ್ಬರಿಗೂ ಆಯೋಜಕರಾದ ತಿಲಾಪಿಯ ಮೀನು ರೈತ ಉತ್ಪಾದಕರ ಸಂಸ್ಥೆಯ ಸಿ.ಇ.ಓ ಮೀನಾಕ್ಷಿ.ಜಿ.ಎಂ. ಮೀನಿನ ಖಾದ್ಯಗಳನ್ನು ಸವಿಯಲು ಅವಕಾಶ ಮಾಡಿದ್ದರು.

ಇದೆ ವೇಳೆ ರೀಜನಲ್ ಸೆಂಟರ್‌ನ ವಿಜ್ಞಾನಿ ಡಾ.ನರಸಿಂಹ ಮೂರ್ತಿ,ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಶಿವಶಂಕರ್.ಎ.ಸಿ, ಸಹಾಯಕ ನಿರ್ದೇಶಕರಾದ ನಾಗೇಂದ್ರ ಬಾಬು.ಆರ್.ಎಸ್, ತಿಲಾಪಿಯ ಮೀನು ರೈತ ಉತ್ಪಾದ ಕರ ಸಂಸ್ಥೆಯ ಸಿ.ಇ.ಓ ಮೀನಾಕ್ಷಿ.ಜಿ.ಎಂ. ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ರಾಜಲಕ್ಷ್ಮೀ.ಎಂ ಮತ್ತಿತರರು ಇದ್ದರು.

# 2 ಕೋಟಿ ವಿಮೆ ಹಣಕ್ಕಾಗಿ ವಿಷ ಹಾಕಿ ಪತ್ನಿಯಿಂದಲೇ ಪತಿಯ ಹತ್ಯೆ



**ಬೆಳಗಾವಿ:** ರಸ್ತೆ ಅಪಘಾತದಲ್ಲಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆ ಯುತ್ತಿದ್ದ ಮಾಜಿ ಸೈನಿಕನನ್ನು ಗ್ಲೂಕೋಸ್ ಬಾಟಲ್‌ಗೆ ವಿಷ ಬೆರೆಸಿ ಕೊಲೆ ಮಾಡಿರುವ ಆರೋಪ ಬೆಳಗಾವಿ ಜಿಲ್ಲೆಯಲ್ಲಿ ಸಂಚಲನ ಸೃಷ್ಟಿಸಿದೆ. ಹುಕ್ಕೇರಿ ತಾಲೂಕಿನ ಘೋಡಗೇರಿ ಗ್ರಾಮದ ನಿವಾಸಿ ಸಂದೀಪ್ ಮಾಂಜರಿ (45) ಮೃತಪಟ್ಟ ಮಾಜಿ ಸೈನಿಕರಾಗಿದ್ದಾರೆ.

ಮೂರು ತಿಂಗಳ ಹಿಂದೆ ದೇವಿ ಜಾತ್ರೆಯಿಂದ ಮನೆಗೆ ಮರಳುತ್ತಿದ್ದ ವೇಳೆ ಸಂದೀಪ್ ರಸ್ತೆ ಅಪಘಾತಕ್ಕೀಡಾಗಿ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಈ ಸಂದರ್ಭದಲ್ಲೇ ಅವರ ಪತ್ನಿ ಸುಮಾ ಮಾಂಜರಿ ಹಾಗೂ ಆಕೆಯ ಪ್ರಿಯಕರ ಪುಂಡಲೀಕ ಸೇರಿ ಗ್ಲೂಕೋಸ್ ಬಾಟಲ್‌ನಲ್ಲಿ ವಿಷ ಬೆರೆಸಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

ಕುಟುಂಬಸ್ಥರ ಆರೋಪದ ಪ್ರಕಾರ, ಅಕ್ರಮ ಸಂಬಂಧ ಮುಂದುವರಿಸುವ ಉದ್ದೇಶ ಹಾಗೂ ಪತಿಯ ಹೆಸರಿನ ಸುಮಾರು 2 ಕೋಟಿ ವಿಮೆ ಮೊತ್ತ ಪಡೆಯುವ ದುರಾಸೆಯಿಂದ ಈ ಕೃತ್ಯ ಎಸಗಲಾಗಿದೆ ಎನ್ನಲಾಗಿದೆ. ಸಂದೀಪ್ ಸಾವಿನ ಬಗ್ಗೆ ಅನುಮಾನ ವ್ಯಕ್ತವಾದ ಹಿನ್ನೆಲೆಯಲ್ಲಿ ಪೊಲೀಸರು ತನಿಖೆ ಆರಂಭಿಸಿದ್ದರು.

ಮೃತ ಸಂದೀಪ್ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದು, ಗ್ರಾಮದಲ್ಲಿ ಉತ್ತಮ ಹೆಸರು ಗಳಿಸಿದ್ದರು ಎಂದು ಸ್ಥಳೀಯರು ತಿಳಿಸಿದ್ದಾರೆ. ಅವರ ಅಕಾಲಿಕ ಸಾವು ಕುಟುಂಬಸ್ಥರು ಹಾಗೂ ಗ್ರಾಮಸ್ಥರಿಗೆ ಆಘಾತ ಉಂಟುಮಾಡಿದ್ದು, ಪ್ರಕರಣದ ಸತ್ಯಾಸತ್ಯತೆ ಹೊರಬರಬೇಕೆಂದು ಆಗ್ರಹಿಸಿದ್ದಾರೆ.

ಸಂದೀಪ್ ಅವರ ಆರೋಗ್ಯದಲ್ಲಿ ಏಕಾಏಕಿ ಹದಗೆಟ್ಟ ಲಕ್ಷಣಗಳು ಕಂಡುಬಂದಿದ್ದರಿಂದ ಕುಟುಂಬಸ್ಥರಿಗೆ ಅನುಮಾನ ಮೂಡಿತ್ತು. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವ್ಯಕ್ತಿ ಅನಿ–ರೀಕ್ಷಿತವಾಗಿ ಮೃತಪಟ್ಟಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದ್ದು, ಬಳಿಕ ಪೊಲೀಸರಿಗೆ ದೂರು ನೀಡಲಾಗಿತ್ತು.

ತನಿಖೆ ವೇಳೆ ಹಲವು ಅನುಮಾನಾಸ್ಪದ ಅಂಶಗಳು ಬೆಳಕಿಗೆ ಬಂದಿದ್ದು, ಅಧಿಕಾರಿಗಳ ಸಮ್ಮುಖದಲ್ಲಿ ಹೂತಿದ್ದ ಶವವನ್ನು ಹೊರತೆಗೆದು ಮರು ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಶವದ ಅವಶೇಷಗಳನ್ನು ಹೆಚ್ಚಿನ ಪರೀಕ್ಷೆಗಾಗಿ ಎಫ್‌ಎಸ್‌ಎಲ್‌ಗೆ ರವಾನಿಸಲಾಗಿದೆ.

ಈಗಾಗಲೇ ಪೊಲೀಸರು ಸುಮಾ ಮಾಂಜರಿ ಹಾಗೂ ಆಕೆಯ ಪ್ರಿಯಕರ ಪುಂಡಲೀಕನನ್ನು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ. ಎಫ್‌ಎಸ್‌ಎಲ್ ವರದಿ ಬಂದ ಬಳಿಕ ಸಾವಿನ ನಿಖರ ಕಾರಣ ಹಾಗೂ ಕೊಲೆ ಆರೋಪದ ಸತ್ಯಾಸತ್ಯತೆ ಸ್ಪಷ್ಟವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಸಂಬಂಧ ಯಮಕನಮರಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ. ಮಾಜಿ ಸೈನಿಕನ ಸಾವಿನ ಹಿಂದೆ ಸಂಚು ಇದೆಯೇ ಎಂಬ ಬಗ್ಗೆ ಪೊಲೀಸರು ಎಲ್ಲ ಆಯಾಮಗಳಿಂದ ತನಿಖೆ ನಡೆಸುತ್ತಿದ್ದಾರೆ.

# 11 ಕೋಟಿ ಮೌಲ್ಯದ ಹೈಡ್ರೋಪೋನಿಕ್ಸ್ ಗಾಂಜಾ ಸಮೇತ ಸಿಕ್ಕಿಬಿದ್ದ ಕೇರಳದ ಬ್ಯೂಟಿ ಕಂಟೆಸ್ಟೆಂಟ್



**ಮುಂಬೈ:** ಸುಮಾರು 11 ಕೋಟಿ ಮೌಲ್ಯದ ಹೈಡ್ರೋಪೋನಿಕ್ಸ್ ಗಾಂಜಾವನ್ನು ಬ್ಯಾಂಕಾಕ್‌ನಿಂದ ಭಾರತಕ್ಕೆ ಸಾಗಿಸುತ್ತಿದ್ದ ಆರೋಪದ ಮೇಲೆ ಮಿಸೆಸ್ ಕೇರಳ ಸೌಂದರ್ಯ ಸ್ಪರ್ಧೆಯ ಮಾಜಿ ಸ್ಪರ್ಧಿಯನ್ನು ಕಸ್ಟಮ್ಸ್ ಅಧಿಕಾರಿಗಳು ಬಂಧಿಸಿದ್ದಾರೆ.

ಮಾಡೆಲ್ ಹರ್ಷ ಸನ್ನಿ ಮುಂಬೈನ ಛತ್ರಪತಿ ಶಿವಾಜಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಗಾಂಜಾ ಸಮೇತ ಅಧಿಕಾರಿಗಳಿಗೆ ಸಿಕ್ಕಿಬಿದ್ದಿದ್ದಾರೆ.

ಏರ್ ಇಂಟೆಲಿಜೆನ್ಸ್ ಯೂನಿಟ್ (ಂಖಗ) ಪ್ರಕಾರ, ಮಾಡೆಲ್ ಹರ್ಷ ಸನ್ನಿ ಜೂನ್ 10–11ರ ರಾತ್ರಿ ಬ್ಯಾಂಕಾಕ್‌ನಿಂದ ಏರ್ ಇಂಡಿಯಾ ವಿಮಾನ ಖಿಉ–351 ಮೂಲಕ ಮುಂಬೈನ ಶಿವಾಜಿ ಏರ್‌ಪೋರ್ಟ್‌ಗೆ ಬಂದಿಳಿದಿದ್ದರು. ಅನುಮಾನದ ಮೇಲೆ ಆಕೆಯನ್ನ ತಡೆಹಿಡಿದು ವಿಚಾರಣೆಗೆ ಒಳಪಡಿಸಲಾಯಿತು. ಆಕೆಯ ಲಗೇಜ್ ಬ್ಯಾಗ್‌ಗಳನ್ನ ಶೋಧಿಸುವ ವೇಳೆ ಸುಮಾರು 12 ಪ್ಯಾಕೆಟ್ ಕವರ್‌ಗಳನ್ನ ವಶಪಡಿಸಿಕೊಂಡಿದ್ದಾರೆ. ಆ ಪ್ಯಾಕೆಟ್‌ಗಳನ್ನ ತೆರೆದಾಗ ಹಸಿರು ಬಣ್ಣದ ವಸ್ತುಗಳು ಪತ್ತೆಯಾಗಿವೆ. ಪರಿಶೀಲಿಸಿದ ನಂತರ ಅದು ಹೈಡ್ರೋಪೋನಿಕ್ಸ್ ಗಾಂಜಾ ಎಂಬುದನ್ನು ಅಧಿಕಾರಿಗಳು ಪತ್ತೆಮಾಡಿದ್ದಾರೆ. ವಶಪಡಿಸಿಕೊಂಡ ಅಕ್ರಮ ವಸ್ತುಗಳ ಅಂದಾಜು ಮೌಲ್ಯ 11.82 ಕೋಟಿ ರೂ.ಗಳಿಗೂ ಹೆಚ್ಚು ಎಂದು ಅಂದಾಜಿಸಿದ್ದಾರೆ.


ಹೈಡ್ರೋಪೋನಿಕ್ಸ್ ಗಾಂಜಾ ವಶಪಡಿಸಿಕೊಂಡ ಬಳಿಕ, ಎನ್ ಡಿ ಪಿ ಎಸ್ ಆಕ್ಟ್ ಅಡಿಯಲ್ಲಿ ಹರ್ಷ ಸನ್ನಿ ಅವರನ್ನ ಬಂಧಿಸಲಾಯಿತು. ನಂತರ ಕೋರ್ಟ್‌ಗೆ ಹಾಜರುಪಡಿಸಿದ ಬಳಿಕ ಅವರನ್ನ ಎಸ್ಪನೇಡ್ (ಕಿಲ್ಲಾ) ನ್ಯಾಯಾಲಯವು ಆಕೆಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತು. ಈ ಪ್ರಕರಣದ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ.

# ಮೂಕಾಂಬಿಕೆ ದೇವಿ ದರ್ಶನ ಪಡೆದ ವಿಜಯ್: ದೇವಿಗೆ ಬೆಳ್ಳಿ ಖಡ್ಗ ಅರ್ಪಿಸಿದ ತಮಿಳುನಾಡು ಸಿಎಂ

**ಉಡುಪಿ:** ತಮಿಳುನಾಡಿನ ಮುಖ್ಯಮಂತ್ರಿ ಹಾಗೂ ನಟ–ರಾಜಕಾರಣಿ ವಿಜಯ್ ಅವರು ಶುಕ್ರವಾರ ಉಡುಪಿ ಜಿಲ್ಲೆಯ ಪ್ರಸಿದ್ಧ ಶಕ್ತಿ ಪೀಠವಾದ ಕೊಲ್ಲೂರು ಶ್ರೀ ಮೂಕಾಂಬಿಕೆ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ದೇವಿಯ ಸನ್ನಿಧಿಯಲ್ಲಿ ಸಂಕಲ್ಪ ನೆರವೇರಿಸಿದ ಅವರು, ಸಂಪ್ರದಾಯಬದ್ಧ ವಸ್ತ್ರಧಾರಣೆ ಯಲ್ಲಿ ದೇವಿಯ ದರ್ಶನ ಪಡೆದು ಭಕ್ತಿಭಾವ ಮೆರೆದರು. ಈ ವೇಳೆ ದೇವಿಗೆ ಬೆಳ್ಳಿ ಖಡ್ಗ, ರೇಷ್ಮೆ ಸೀರೆ, ಹೂವು ಹಾಗೂ ಹಣ್ಣುಗಳನ್ನು ಸಮರ್ಪಿಸಿ ಆಶೀರ್ವಾದ ಪಡೆದರು.

ತಮಿಳುನಾಡಿನ ಮುಖ್ಯಮಂತ್ರಿ ಹುದ್ದೆ ಅಲಂಕ–ರಿಸಿದ ಬಳಿಕ ಮೊದಲ ಬಾರಿಗೆ ಕೊಲ್ಲೂರು ಕ್ಷೇತ್ರಕ್ಕೆ ಆಗಮಿಸಿದ ವಿಜಯ್ ಅವರ ಭೇಟಿಗೆ ವಿಶೇಷ ಮಹತ್ವ ಸಿಕ್ಕಿತ್ತು. ಬೆಳಿಗ್ಗೆ ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರು ಅಲ್ಲಿಂದ ರಸ್ತೆ ಮಾರ್ಗದ ಮೂಲಕ ಕೊಲ್ಲೂರಿಗೆ ತೆರಳಿದರು. ಮಾರ್ಗದುದ್ದಕ್ಕೂ ಅಭಿಮಾನಿಗಳು ಹಾಗೂ ಸಾರ್ವಜನಿಕರು ಅವರನ್ನು ಸ್ವಾಗತಿಸಿದರು.

**ಪೂರ್ಣಕುಂಭ ಸ್ವಾಗತ:** ಕೊಲ್ಲೂರು ದೇವಸ್ಥಾನಕ್ಕೆ ಆಗಮಿಸಿದ ಸಿಎಂ ವಿಜಯ್ ಅವರನ್ನು ದೇವಸ್ಥಾನದ ಆಡಳಿತ ಮಂಡಳಿ, ಅರ್ಚಕ ವೃಂದ ಹಾಗೂ ಅಧಿಕಾರಿಗಳು ಸಾಂಪ್ರದಾಯಿಕವಾಗಿ ಪೂರ್ಣಕುಂಭ ಸ್ವಾಗತ ನೀಡಿ ಬರಮಾಡಿಕೊಂಡರು. ವೇದಮಂತ್ರಗಳ ಘೋಷ, ಮಂಗಳವಾದ್ಯ ಹಾಗೂ ಪೂಜಾ ವಿಧಿವಿಧಾನಗಳೊಂದಿಗೆ ಅವರನ್ನು ದೇವಸ್ಥಾನದೊಳಗೆ ಕರೆದುಕೊಂಡು ಹೋಗಲಾಯಿತು.



ಸರ್ಕಾರಿ ಶಿಷ್ಟಾಚಾರದ ಭಾಗವಾಗಿ ವಿಧಾನಸಭೆ ಸಭಾಧ್ಯಕ್ಷ ಹಾಗೂ ಸಚಿವ ಯು.ಟಿ. ಖಾದರ್ ಅವರು ಮಂಗಳೂರು ವಿಮಾನ ನಿಲ್ದಾಣದಲ್ಲೇ ವಿಜಯ್ ಅವರನ್ನು ಸ್ವಾಗತಿಸಿದ್ದರು. ಬಳಿಕ ಜಿಲ್ಲಾ ಆಡಳಿತದ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಅವರೊಂದಿಗೆ ತೆರಳಿದರು.

**ದೇವಸ್ಥಾನದ ವಸ್ತ್ರಸಂಹಿತೆಗೆ ಗೌರವ:** ಕೊಲ್ಲೂರು ಶ್ರೀ ಮೂಕಾಂಬಿಕೆ ದೇವಸ್ಥಾನದಲ್ಲಿ ಪುರುಷ ಭಕ್ತರಿಗೆ ವಿಶೇಷ ವಸ್ತ್ರಸಂಹಿತೆ ಜಾರಿಯಲ್ಲಿದ್ದು, ಶರ್ಟ್, ಟೀ–ಶರ್ಟ್, ಬನಿಯನ್ ಹಾಗೂ ಪ್ಯಾಂಟ್ ಧರಿಸಿ ದೇವಿಯ ಸನ್ನಿಧಿಗೆ ಪ್ರವೇಶಿಸುವಂತಿಲ್ಲ. ದೇವಸ್ಥಾನದ ಈ ಶತಮಾನಗಳ ಸಂಪ್ರದಾಯವನ್ನು ಸಿಎಂ ವಿಜಯ್ ಕೂಡ ಕಟ್ಟುನಿಟ್ಟಾಗಿ ಪಾಲಿಸಿದರು.

ದೇವಾಲಯ ಪ್ರವೇಶಿಸುವ ಮುನ್ನ ಅವರು ತಮ್ಮ ಶರ್ಟ್ ತೆಗೆದು ಕೆಂಪು ಬಣ್ಣದ ಶಲ್ಯ ಧರಿಸಿ ಪಂಚೆ ಉಟ್ಟು ಸಾಂಪ್ರದಾಯಿಕ ವೇಷದಲ್ಲಿ ದೇವಿಯ ಸನ್ನಿಧಿಗೆ ತೆರಳಿದರು. ರಾಜ್ಯದ ಮುಖ್ಯಮಂತ್ರಿಯಾಗಿದ್ದರೂ ಯಾವುದೇ ವಿಶೇಷ ವಿನಾಯಿತಿ ಪಡೆಯದೆ ಸಾಮಾನ್ಯ ಭಕ್ತನಂತೆ ದೇವಸ್ಥಾನದ ನಿಯಮಗಳನ್ನು ಪಾಲಿಸಿದ್ದು ಭಕ್ತರ ಮೆಚ್ಚುಗೆಗೆ ಪಾತ್ರವಾಯಿತು.

**ಪ್ರಧಾನ ಅರ್ಚಕರ ನೇತೃತ್ವದಲ್ಲಿ ವಿಶೇಷ ಸಂಕಲ್ಪ:** ದೇವಾಲಯದ ಪ್ರಧಾನ ಅರ್ಚಕ ರಾಮಚಂದ್ರ ಅಡಿಗ ಅವರ ನೇತೃತ್ವದಲ್ಲಿ ವಿಜಯ್ ವಿಶೇಷ ಸಂಕಲ್ಪ ಪೂಜೆ ನೆರವೇರಿಸಿದರು. ಪೂಜೆಯ ಆರಂಭದಲ್ಲಿ ಅವರ ಕೈಗೆ ಸಂಕಲ್ಪ ದಾರವನ್ನು ಕಟ್ಟಲಾಯಿತು. ಬಳಿಕ ವಿವಿಧ ಧಾರ್ಮಿಕ ವಿಧಿವಿಧಾನಗಳು ನಡೆದವು.

ಪೂಜೆ ವೇಳೆ ದೇವಿಗೆ ವಿಶೇಷ ದೀಪಾರಾಧನೆ ಸಲ್ಲಿಸಲಾಯಿತು. ವಿಜಯ್ ಅವರು ದೇವಿಯ ಮುಂದೆ ಪ್ರಾರ್ಥನೆ ಸಲ್ಲಿಸಿ ರಾಜ್ಯದ ಜನರ ಒಳಿತಿಗಾಗಿ ಆಶೀರ್ವಾದ ಕೋರಿದರು ಎನ್ನಲಾಗಿದೆ. ಬಳಿಕ ದೇವಿಗೆ ಬೆಳ್ಳಿ ಖಡ್ಗ, ರೇಷ್ಮೆ ಸೀರೆ, ಹೂವು, ಹಣ್ಣು ಹಾಗೂ ಇತರ ಕಾಣಿಕೆಗಳನ್ನು ಅರ್ಪಿಸಿದರು.

**ಅರ್ಧ ಗಂಟೆ ಧ್ಯಾನಸ್ಥರಾಗಿ ಕುಳಿತ ವಿಜಯ್:** ಪೂಜೆ ಮುಗಿದ ಬಳಿಕ ವಿಜಯ್ ಅವರು ದೇವಿಯ ಸನ್ನಿಧಿಯಲ್ಲಿ ಸುಮಾರು ಅರ್ಧ ಗಂಟೆ ಕಾಲ ಧ್ಯಾನಸ್ಥರಾಗಿ ಕುಳಿತಿದ್ದರು. ಕಣ್ಣು ಮುಚ್ಚಿ ಮೌನವಾಗಿ ಪ್ರಾರ್ಥನೆ ಸಲ್ಲಿಸಿದ ಅವರು ಭಕ್ತಿಭಾವದಲ್ಲಿ ಕೆಲಕಾಲ ಕಳೆದರು.

ಈ ಸಂದರ್ಭದಲ್ಲಿ ದೇವಸ್ಥಾನದೊಳಗೆ ವಿಶೇಷ ಭದ್ರತಾ ವ್ಯವಸ್ಥೆ ಜಾರಿಗೊಳಿಸಲಾಗಿತ್ತು. ಪೂಜಾ ವಿಧಿ ವಿಧಾನಗಳು ನಡೆಯುವ ವೇಳೆಯಲ್ಲಿ ಸಾಮಾನ್ಯ ಭಕ್ತರ ಪ್ರವೇಶವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿತ್ತು. ಸಿಎಂ ವಿಜಯ್ ಅವರ ಭದ್ರತೆ ಹಾಗೂ ಪೂಜೆ ನಿರ್ವಹಣೆಗೆ ಅನುಕೂಲವಾಗುವಂತೆ ವಿಶೇಷ ವ್ಯವಸ್ಥೆ ಮಾಡಲಾಗಿತ್ತು.

**ಬಿಗಿ ಪೊಲೀಸ್ ಬಂದೋಬಸ್ತ್:** ಮುಖ್ಯಮಂತ್ರಿಯವರ ಭೇಟಿ ಹಿನ್ನೆಲೆಯಲ್ಲಿ ಕೊಲ್ಲೂರು ಕ್ಷೇತ್ರದ ಸುತ್ತಮುತ್ತ ಬಿಗಿ ಪೊಲೀಸ್ ಭದ್ರತೆ ಏರ್ಪಡಿಸಲಾಗಿತ್ತು. ದೇವಸ್ಥಾನದ ಪ್ರವೇಶ ದ್ವಾರ, ಒಳಾಂಗಣ, ಸುತ್ತಮುತ್ತಲಿನ ರಸ್ತೆಗಳಲ್ಲಿ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಭದ್ರತಾ ಕಾರಣಗಳಿಂದ ದೇವಸ್ಥಾನ ಪ್ರವೇಶಿಸುವ ಪ್ರತಿಯೊಬ್ಬರನ್ನೂ ತಪಾಸಣೆ ನಡೆಸಿ ಒಳಗೆ ಬಿಡಲಾಗುತ್ತಿತ್ತು.

ವಿಜಯ್ ಅವರ ಭೇಟಿ ವೇಳೆ ಸಾವಿರಾರು ಅಭಿಮಾನಿಗಳು ಮತ್ತು ಭಕ್ತರು ಕ್ಷೇತ್ರದ ಸುತ್ತಮುತ್ತ ಜಮಾಯಿಸಿದ್ದರು. ಆದರೂ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿತ್ತು.

**ಕೊಲ್ಲೂರಿನಿಂದ ಮಂಗಳೂರಿಗೆ ಪ್ರಯಾಣ:** ದೇವಿಯ ದರ್ಶನ, ವಿಶೇಷ ಪೂಜೆ ಹಾಗೂ ಧ್ಯಾನ ಮುಗಿಸಿದ ಬಳಿಕ ಸಿಎಂ ವಿಜಯ್ ಕೆಲಕಾಲ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯರೊಂದಿಗೆ ಮಾತುಕತೆ ನಡೆಸಿದರು. ನಂತರ ಕೊಲ್ಲೂರಿನಿಂದ ರಸ್ತೆ ಮಾರ್ಗದ ಮೂಲಕ ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದತ್ತ ಪ್ರಯಾಣ ಬೆಳೆಸಿದರು.

ಕೊಲ್ಲೂರು ಮೂಕಾಂಬಿಕೆ ದೇವಿಯ ದರ್ಶನ ಪಡೆದ ವಿಜಯ್ ಅವರ ಚಿತ್ರಗಳು ಮತ್ತು ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹ–ರಿದಾಡುತ್ತಿದ್ದು, ಭಕ್ತಿಭಾವದಿಂದ ದೇವಸ್ಥಾನದ ಸಂಪ್ರದಾಯ ಪಾಲಿಸಿದ ಅವರ ನಡೆಗೆ ಅನೇಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಸುಳ್ಳು ಸುದ್ದಿ ಹಬ್ಬಿಸಿದವರನ್ನು ಸುಮ್ನೆ ಬಿಡಲ್ಲ: ದೊಡ್ಡಣ್ಣ



**ಬೆಂಗಳೂರು:** ಕನ್ನಡ ಚಿತ್ರರಂಗದ ಹಿರಿಯ ನಟ ದೊಡ್ಡಣ್ಣ ಅವರ ನಿಧನದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಹ–ರಿದಾಡಿದ ಸುಳ್ಳು ಸುದ್ದಿ ಅಭಿಮಾನಿಗಳಲ್ಲಿ ಆತಂಕ ಮೂಡಿಸಿದ ಘಟನೆ ನಡೆದಿದೆ. ಫೇಸ್‌ಬುಕ್ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ದೊಡ್ಡಣ್ಣ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿರುವ ಪೋಸ್ಟರ್‌ಗಳು ವೈರಲ್ ಆಗುತ್ತಿದ್ದಂತೆ ಅಭಿಮಾನಿಗಳು, ಸ್ನೇಹಿತರು ಹಾಗೂ ಚಿತ್ರರಂಗದ ಹಲವರು ಆತಂಕ ಕ್ಕೊಳಗಾಗಿದ್ದರು.

'ಪಬ್ಲಿಕ್ ಫ್ರೆಂಡ್' ಹೆಸರಿನ ಫೇಸ್‌ಬುಕ್ ಪೇಜ್‌ನಲ್ಲಿ ದೊಡ್ಡಣ್ಣ ಅವರ ಫೋಟೋ ಬಳಸಿ 'ದೊಡ್ಡಣ್ಣ ಇನ್ನಿಲ್ಲ' ಎಂಬ ಶೀರ್ಷಿಕೆಯೊಂದಿಗೆ ಪೋಸ್ಟ್ ಹಂಚಿಕೊಳ್ಳಲಾಗಿತ್ತು. ಅಲ್ಲದೆ ಜೂನ್ 12ರಂದು ಅವರು ನಿಧನರಾಗಿದ್ದಾರೆ ಎಂಬ ರೀತಿಯಲ್ಲಿ ಶ್ರದ್ಧಾಂಜಲಿ ಸಂದೇಶ ಪ್ರಕಟಿಸಲಾಗಿತ್ತು. ಈ ಪೋಸ್ಟ್ ಕೆಲವೇ ಗಂಟೆಗಳಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಡಿತ್ತು.

ಈ ವದಂತಿ ತಮ್ಮ ಗಮನಕ್ಕೆ ಬಂದ ಬಳಿಕ ಸ್ವತಃ ದೊಡ್ಡಣ್ಣ ಅವರೇ ಪ್ರತಿಕ್ರಿಯೆ ನೀಡಿ ಸ್ಪಷ್ಟನೆ ನೀಡಿದ್ದಾರೆ. "ನಾನು ಸಂಪೂರ್ಣ ಆರೋಗ್ಯವಾಗಿದ್ದೇನೆ. ಮನೆ ಯಲ್ಲಿ ಆರಾಮವಾಗಿ ಕುಳಿತು ಟೀ ಕುಡಿಯುತ್ತಿದ್ದೇನೆ. ನನಗೆ ಏನೂ ಆಗಿಲ್ಲ. ಯಾರೂ ಆತಂಕಪಡುವ ಅಗತ್ಯವಿಲ್ಲ" ಎಂದು ಅವರು ಹೇಳಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಹ–ರಿದಾಡುತ್ತಿರುವ ಶ್ರದ್ಧಾಂಜಲಿ ಪೋಸ್ಟರ್ ಸಂಪೂರ್ಣವಾಗಿ ನಕಲಿ ಹಾಗೂ ಎಡಿಟ್ ಮಾಡಿರುವ ಚಿತ್ರವಾಗಿದೆ. ಇಂತಹ ಸುಳ್ಳು ಸುದ್ದಿಗಳನ್ನು ಯಾರೂ ನಂಬಬೇಡಿ ಮತ್ತು ಹಂಚಿಕೊಳ್ಳಬೇಡಿ ಎಂದು ದೊಡ್ಡಣ್ಣ ಅಭಿಮಾನಿಗಳಲ್ಲಿ ಮನವಿ ಮಾಡಿದ್ದಾರೆ.

ಈ ಘಟನೆಗೆ ಸಾಮಾಜಿಕ ಜಾಲತಾಣ ಬಳಕೆದಾರರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಿರಿಯ ನಟರು ಹಾಗೂ ಸಾರ್ವಜನಿಕ ವ್ಯಕ್ತಿಗಳ ಬಗ್ಗೆ ಪದೇ ಪದೇ ಇಂತಹ ಸುಳ್ಳು ಸಾವು ಸುದ್ದಿಗಳನ್ನು ಹರಡುವುದು ಖಂಡನೀಯ ಎಂದು ನೆಟ್ಟಿಗರು ಅಭಿಪ್ರಾಯಪಟ್ಟಿದ್ದಾರೆ. ಕೆಲವರು ಇಂತಹ ಸುಳ್ಳು ಮಾಹಿತಿ ಹರಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಕನ್ನಡ ಚಿತ್ರರಂಗದಲ್ಲಿ ಹಲವು ದಶಕಗಳಿಂದ ತಮ್ಮ ವಿಶಿಷ್ಟ ಹಾಸ್ಯ ಮತ್ತು ಪಾತ್ರಗಳ ಮೂಲಕ ಪ್ರೇಕ್ಷಕರ ಮನ ಗೆದ್ದಿರುವ ದೊಡ್ಡಣ್ಣ ಅವರ ಬಗ್ಗೆ ಈ ರೀತಿಯ ಸುಳ್ಳು ಸುದ್ದಿ ಹರಿದಾಡಿರುವುದು ಅಭಿಮಾನಿಗಳ ಬೇಸರಕ್ಕೆ ಕಾರಣವಾಗಿದೆ. ಸದ್ಯ ನಟ ದೊಡ್ಡಣ್ಣ ಆರೋಗ್ಯವಾಗಿದ್ದು, ತಮ್ಮ ದಿನನಿತ್ಯದ ಚಟುವಟಿಕೆಗಳಲ್ಲಿ ತೊಡಗಿಸಿ ಕೊಂಡಿದ್ದಾರೆ ಎಂಬುದು ಅವರ ಸ್ಪಷ್ಟನೆಯಿಂದ ತಿಳಿದುಬಂದಿದೆ.

# ರಾಜಕೀಯ ಪ್ರವೇಶಕ್ಕೆ ಫ್ಯಾನ್ಸ್ ಕೇಳಿದ ಲಾರೆನ್ಸ್

**ಚೆನ್ನೈ:** ನಟ, ನಿರ್ದೇಶಕ, ನೃತ್ಯ ನಿರ್ದೇಶಕ ಹಾಗೂ ಸಮಾಜಸೇವಕನಾಗಿ ಗುರುತಿಸಿಕೊಂಡಿರುವ ರಾಘವ್ ಲಾರೆನ್ಸ್ ಇದೀಗ ರಾಜಕೀಯ ಪ್ರವೇಶದ ಸುಳಿವು ನೀಡಿದ್ದು, ಈ ಕುರಿತು ಅಂತಿಮ ನಿರ್ಧಾರವನ್ನು ತಮ್ಮ ಅಭಿಮಾನಿಗಳ ಕೈಗೆ ಬಿಟ್ಟಿದ್ದಾರೆ. ಹಲವು ವರ್ಷಗಳಿಂದ ಸಾಮಾಜಿಕ ಸೇವೆಗಳ ಮೂಲಕ ಜನಮನ ಗೆದ್ದಿರುವ ಲಾರೆನ್ಸ್, ತಮಿಳುನಾಡು ರಾಜಕೀಯದಲ್ಲಿ ಹೊಸ ಇನ್ನಿಂಗ್ಸ್ ಆರಂಭಿಸುವ ಸಾಧ್ಯತೆ ಇದೆ ಎಂಬ ಚರ್ಚೆಗಳು ಜೋರಾಗಿವೆ.

ಚಿತ್ರರಂಗದಲ್ಲಿ ವಿಶಿಷ್ಟ ಸ್ಥಾನ ಗಳಿಸಿರುವ ರಾಘವ್ ಲಾರೆನ್ಸ್, ಕಳೆದ ಹಲವು ವರ್ಷಗಳಿಂದ ಶಿಕ್ಷಣ, ಆರೋಗ್ಯ, ಬಡವರ ನೆರವು ಹಾಗೂ ಅಂಗವಿಕಲರ ಕಲ್ಯಾಣ ಕ್ಷೇತ್ರಗಳಲ್ಲಿ ಸಕ್ರಿಯವಾಗಿ ಕೆಲಸ ಮಾಡುತ್ತಿದ್ದಾರೆ. ಅನಾಥ ಮತ್ತು ಬಡ ಮಕ್ಕಳ ಶಿಕ್ಷಣಕ್ಕೆ ನೆರವು ನೀಡುವುದು, ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ ಆಟೋ ರಿಕ್ಷಾ ಒದಗಿಸುವುದು, ಅಂಗವಿಕಲರಿಗೆ ಮನೆ ಹಾಗೂ ಜೀವನೋಪಾಯ ಕಲ್ಪಿಸುವುದು ಸೇರಿದಂತೆ ಹಲವು ಸಾಮಾಜಿಕ ಕಾರ್ಯಗಳಿಂದ ಅವರು ಜನಪ್ರಿಯರಾಗಿದ್ದಾರೆ.



ಇತ್ತೀಚಿನ ದಿನಗಳಲ್ಲಿ ರಾಘವ್ ಲಾರೆನ್ಸ್ ರಾಜಕೀಯಕ್ಕೆ ಬರಲಿದ್ದಾರೆ ಎಂಬ ಸುದ್ದಿ ತಮಿಳುನಾಡು ರಾಜ–ಕೀಯ ವಲಯದಲ್ಲಿ ವ್ಯಾಪಕವಾಗಿ ಹರಿದಾಡುತ್ತಿತ್ತು. ವಿಶೇಷವಾಗಿ ತಮಿಳ ುನಾಡು ಮುಖ್ಯಮಂತ್ರಿ ವಿಜಯ್ ಅವರ ನೇತೃತ್ವದ ಟಿವಿಕೆ ಪಕ್ಷದಿಂದ ಅವರು ಚುನಾವಣೆಗೆ ಸ್ಪರ್ಧಿಸುವ ಸಾಧ್ಯತೆ ಇದೆ ಎನ್ನಲಾಗುತ್ತಿತ್ತು. ಈ ಎಲ್ಲ ಊಹಾಪೋಹಗಳ ನಡುವೆಯೇ ಖುದ್ದು ಲಾರೆನ್ಸ್ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಬಿಡುಗಡೆ ಮಾಡಿ ರಾಜಕೀಯ ಪ್ರವೇಶದ ಬಗ್ಗೆ ಮಾತನಾಡಿದ್ದಾರೆ.

ವಿಡಿಯೋದಲ್ಲಿ ಮಾತನಾಡಿರುವ ಲಾರೆನ್ಸ್, "ಸೂಪರ್ ಸ್ಟಾರ್ ರಜನಿಕಾಂತ್ ರಾಜಕೀಯಕ್ಕೆ ಬರಲು ನಿರ್ಧರಿಸಿದಾಗ ಅವರೊಂದಿಗೆ ರಾಜಕೀಯ ಪ್ರವೇಶಿಸಲು ನಾನು ಕೂಡ ಉತ್ಸುಕನಾಗಿದ್ದೆ. ಆದರೆ ನನ್ನ ತಾಯಿ ಅದಕ್ಕೆ ಒಪ್ಪಿರಲಿಲ್ಲ. ಹೀಗಾಗಿ ರಾಜಕೀಯದಿಂದ ದೂರ ಉಳಿದಿದ್ದೆ. ಬಳಿಕ ವಿಜಯ್ ರಾಜಕೀಯ ಪ್ರವೇಶಿಸಿದಾಗಲೂ ತಾಯಿಯ ಇಚ್ಛೆಯಂತೆ ನಾನು ರಾಜಕೀಯಕ್ಕೆ ಬರಲಿಲ್ಲ" ಎಂದು ಹೇಳಿದ್ದಾರೆ.

ಆದರೆ ತಮಿಳುನಾಡಿನಲ್ಲಿ ವಿಜಯ್ ಮುಖ್ಯಮಂತ್ರಿ ಆಗಿರುವುದು ಹಾಗೂ ಅವರ ರಾಜಕೀಯ ಯಶಸ್ಸು ತಮ್ಮ ತಾಯಿಯ ಮನಸ್ಥಿತಿಯನ್ನು ಬದಲಾಯಿಸಿದೆ ಎಂದು ಲಾರೆನ್ಸ್ ತಿಳಿಸಿದ್ದಾರೆ. "ಈಗ ನನ್ನ ತಾಯಿ ರಾಜಕೀಯ ಪ್ರವೇಶಕ್ಕೆ ಒಪ್ಪಿಗೆ ನೀಡಿದ್ದಾರೆ. ಆದ್ದರಿಂದ ರಾಜಕೀಯಕ್ಕೆ ಬರುವ ಬಗ್ಗೆ ಗಂಭೀರವಾಗಿ ಯೋಚಿಸು ತ್ತಿದ್ದೇನೆ" ಎಂದು ಅವರು ಹೇಳಿದ್ದಾರೆ.

ಇದೇ ವೇಳೆ ವಿಜಯ್ ಅವರ ಟಿವಿಕೆ ಪಕ್ಷದಿಂದ ತಿರುಚ್ಚಿ ಈಸ್ಟ್ ಕ್ಷೇತ್ರದಲ್ಲಿ ಸ್ಪರ್ಧಿಸುವ ಇಚ್ಛೆಯನ್ನು ಲಾರೆನ್ಸ್ ಬಹಿರಂಗ ಪಡಿಸಿದ್ದಾರೆ. ಈ ಕ್ಷೇತ್ರವು ವಿಜಯ್ ರಾಜಕೀಯವಾಗಿ ಹೆಚ್ಚು ಗಮನಹರಿಸಿರುವ ಕ್ಷೇತ್ರಗಳಲ್ಲಿ ಒಂದಾಗಿದ್ದು, ಅಲ್ಲಿಂದ ಸ್ಪರ್ಧಿಸುವ ಬಗ್ಗೆ ಚಿಂತನೆ ನಡೆಸುತ್ತಿರುವುದಾಗಿ ತಿಳಿಸಿದ್ದಾರೆ.

ಆದರೆ ರಾಜಕೀಯಕ್ಕೆ ಬರಬೇಕೋ ಬೇಡವೋ ಎಂಬ ಅಂತಿಮ ನಿರ್ಧಾರವನ್ನು ಅಭಿಮಾನಿಗಳ ಕೈಗೆ ಬಿಟ್ಟಿರುವುದು ವಿಶೇಷ. "ನಾನು ರಾಜಕೀಯಕ್ಕೆ ಬರಬೇಕೆಂದು ನೀವು ಬಯಸಿದರೆ ಎಸ್ ಎಂದು ಕಮೆಂಟ್ ಮಾಡಿ. ಇಷ್ಟವಿಲ್ಲದಿದ್ದರೆ ನೋ ಎಂದು ಕಮೆಂಟ್ ಮಾಡಿ. ನಿಮ್ಮ ಅಭಿಪ್ರಾಯದ ಆಧಾರದ ಮೇಲೆ ನಾನು ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತೇನೆ" ಎಂದು ಲಾರೆನ್ಸ್ ಮನವಿ ಮಾಡಿದ್ದಾರೆ.

ಲಾರೆನ್ಸ್ ಅವರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಸಾವಿರಾರು ಅಭಿಮಾನಿಗಳು ಪ್ರತಿಕ್ರಿಯೆ ನೀಡುತ್ತಿದ್ದಾರೆ. ಹೆಚ್ಚಿನ ಅಭಿಮಾನಿಗಳು "ಎಸ್" ಎಂದು ಕಮೆಂಟ್ ಮಾಡಿ ರಾಜಕೀಯ ಪ್ರವೇಶಕ್ಕೆ ಬೆಂಬಲ ಸೂಚಿಸುತ್ತಿದ್ದರೆ, ಕೆಲವರು ಸಾಮಾಜಿಕ ಸೇವೆಯಲ್ಲೇ ಮುಂದುವ–ರಿಯುವಂತೆ ಸಲಹೆ ನೀಡಿದ್ದಾರೆ.

ರಾಘವ್ ಲಾರೆನ್ಸ್ ರಾಜಕೀಯ ಪ್ರವೇಶಿಸಿದರೆ ತಮಿಳುನಾಡು ರಾಜಕೀಯದಲ್ಲಿ ಮತ್ತೊಬ್ಬ ಜನಪ್ರಿಯ ಸಿನಿತಾರೆ ಸೇರ್ಪಡೆಯಾಗಲಿದ್ದು, ಇದು ಟಿವಿಕೆ ಪಕ್ಷಕ್ಕೂ ಹೊಸ ಬಲ ನೀಡುವ ಸಾಧ್ಯತೆ ಇದೆ ಎಂದು ರಾಜಕೀಯ ವಿಶ್ಲೇಷಕರು ಅಭಿಪ್ರಾಯಪಟ್ಟಿದ್ದಾರೆ. ಸದ್ಯ ಅಭಿಮಾನಿಗಳ ಅಭಿಪ್ರಾಯ ಸಂಗ್ರಹಿಸುತ್ತಿರುವ ಲಾರೆನ್ಸ್ ಅವರ ಮುಂದಿನ ನಿರ್ಧಾರದತ್ತ ತಮಿಳುನಾಡು ರಾಜಕೀಯ ಮತ್ತು ಚಿತ್ರರಂಗದ ಚಿತ್ತ ನೆಟ್ಟಿದೆ.

# ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ ಕಿವೀಸ್ ಲೆಜೆಂಡ್ ಕೇನ್ ವಿಲಿಯಮ್ಸನ್




ನ್ಯೂಜಿಲೆಂಡ್‌ನ ಮಾಜಿ ನಾಯಕ ಕೇನ್ ವಿಲಿಯಮ್ಸನ್ ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಕಳೆದ ಕೆಲವು ವರ್ಷಗಳಿಂದ ಕಳೆಪ ಫಾರ್ಮ್‌ನಿಂದ ಬಳಲುತ್ತಿದ್ದ ವಿಲಿಯಮ್ಸನ್ ತಮ್ಮ 35 ನೇ ವಯಸ್ಸಿನಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಆಟದ ಎಲ್ಲಾ ಸ್ವರೂಪಗಳಿಂದ ನಿವೃತ್ತಿ ಘೋಷಿಸಿದ್ದಾರೆ. ಕಳೆದ ವರ್ಷ ಅಂದರೆ 2025 ರಲ್ಲಿ ಟಿ20 ಕ್ರಿಕೆಟ್‌ಗೆ ನಿವೃತ್ತಿ ಹೇಳಿದ್ದ ಕೇನ್, ಬಹಳ ಸಮಯದಿಂದ ಅಂತರರಾಷ್ಟ್ರೀಯ ಕ್ರಿಕೆಟ್‌ನಿಂದ ದೂರ ಉಳಿದಿದ್ದರು. ಇದೀಗ ತಮ್ಮ 16 ವರ್ಷಗಳ ವೃತ್ತಿಜೀವನಕ್ಕೆ ಪೂರ್ಣವಿರಾಮವನ್ನಿಟ್ಟಿರುವ ವಿಲಿಯಮ್ಸನ್ ನ್ಯೂಜಿಲೆಂಡ್ ತಂಡದ ಪರ ಹಲವಾರು ದಾಖಲೆಗಳನ್ನು ನಿರ್ಮಿಸಿದ್ದಾರೆ. ಕಿವೀಸ್ ಪರ ಅತ್ಯಧಿಕ ರನ್ ಕಲೆಹಾಕಿರುವ ಆಟಗಾರನೆನಿಸಿಕೊಂಡಿರುವ ಕೇನ್, ಇದುವರೆಗೆ ಆಡಿರುವ 378 ಪಂದ್ಯಗಳಲ್ಲಿ 19,346 ರನ್ ಗಳಿಸಿದ್ದಾರೆ. ಇದರಲ್ಲಿ 48 ಶತಕಗಳು ಸೇರಿವೆ. ಆಟಗಾರನಾಗಿ ಮಾತ್ರವಲ್ಲದೆ ನಾಯಕನಾಗಿಯೂ ತಂಡವನ್ನು ಮುನ್ನಡೆಸಿರುವ ವಿಲಿಯಮ್ಸನ್, ತಮ್ಮ ನಾಯಕತ್ವದಲ್ಲಿ ತಂಡವನ್ನು ಎರಡು ಐಸಿಸಿ ಪಂದ್ಯಾವಳಿಗಳ ಫೈನಲ್‌ಗೆ ಕೊಂಡೊಯ್ದಿದ್ದರು. ಅದರಲ್ಲಿ ಒಮ್ಮೆ ತಂಡವನ್ನು ಚಾಂಪಿಯನ್ ಕೂಡ ಮಾಡಿದ್ದರು.


**ಟೆಸ್ಟ್ ಸರಣಿ ನಡುವೆ ನಿವೃತ್ತಿ ಘೋಷಣೆ:** ವಾಸ್ತವವಾಗಿ ಕೇನ್ ವಿಲಿಯಮ್ಸನ್ ತಂಡದೊಂದಿಗೆ ಇಂಗ್ಲೆಂಡ್ ಪ್ರವಾಸದಲ್ಲಿದ್ದಾರೆ. ಈ ಪ್ರವಾಸದಲ್ಲಿ ಉಭಯ ತಂಡಗಳು 3 ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡುತ್ತಿವೆ. ಸರಣಿಯ ಮೊದಲನೇ ಪಂದ್ಯ ಈಗಾಗಲೇ ಮುಗಿದಿದ್ದು, ಈ ಪಂದ್ಯದಲ್ಲಿ ನ್ಯೂಜಿಲೆಂಡ್ ಹೀನಾಯ ಸೋಲು ಕಂಡಿತ್ತು. ಅನುಭವಿ ವಿಲಿಯಮ್ಸನ್ ಎರಡೂ ಇನ್ನಿಂಗ್ಸ್‌ಗಳಲ್ಲಿ ಕಳಪೆ ಪ್ರದರ್ಶನ ನೀಡಿದ್ದರು. ಮೊದಲ ಇನ್ನಿಂಗ್ಸ್‌ನಲ್ಲಿ ಸೊನ್ನೆ ಸುತ್ತಿದ್ದ ಕೇನ್, ಎರಡನೇ ಇನ್ನಿಂಗ್ಸ್‌ನಲ್ಲಿ 18 ರನ್‌ಗಳಿಸಲಷ್ಟೇ ಶಕ್ತರಾಗಿದ್ದರು. ಇದೀಗ ನಿವೃತ್ತಿ ಘೋಷಿಸಿರುವ ವಿಲಿಯಮ್ಸನ್ ಇನ್ನು ಮುಂದೆ ತಂಡದ ಭಾಗವಾಗಿರುವುದಿಲ್ಲ. ಹೀಗಾಗಿ ಅವರ ಬದಲಿಯಾಗಿ ತಂಡಕ್ಕೆ ಬದಲಿ ಆಟಗಾರನ ಆಯ್ಕೆಯಾಗಬೇಕಿದೆ

ವಿಲಿಯಮ್ಸನ್ ವೃತ್ತಿಜೀವನ2010 ರ ನವೆಂಬರ್‌ನಲ್ಲಿ ಅಹಮದಾಬಾದ್‌ನಲ್ಲಿ ಭಾರತ ವಿರುದ್ಧ ನಡೆದಿದ್ದ ಟೆಸ್ಟ್ ಪಂದ್ಯದಲ್ಲಿ ಶತಕ ಬಾರಿಸುವ ಮೂಲಕ ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ ಕೇನ್, ಮೂರು ತಿಂಗಳ ನಂತರ ಇದೇ ಟೀಂ ಇಂಡಿಯಾ ವಿರುದ್ಧ ಏಕದಿನ ಕ್ರಿಕೆಟ್‌ಗೂ ಪಾದಾರ್ಪಣೆ ಮಾಡಿದರು. ತಮ್ಮ ಸುದೀರ್ಘ ವೃತ್ತಿಜೀವನದಲ್ಲಿ ತಂಡದ ಪರ 110 ಟೆಸ್ಟ್ ಪಂದ್ಯಗಳನ್ನಾಡಿರುವ ವಿಲಿಯಮ್ಸನ್, 9515 ರನ್ ಬಾರಿಸಿದ್ದಾರೆ. ಇದರಲ್ಲಿ 38 ಅರ್ಧಶತಕಗಳು ಮತ್ತು 33 ಶತಕಗಳು ಸೇರಿವೆ. ಹಾಗೆಯೇ 175 ಏಕದಿನ ಪಂದ್ಯಗಳಲ್ಲಿ 48.69 ಸರಾಸರಿಯಲ್ಲಿ 7256 ರನ್ ಬಾರಿಸಿರುವ ಕೇನ್, ಇದರಲ್ಲಿ 47 ಅರ್ಧಶತಕಗಳು ಮತ್ತು 15 ಶತಕಗಳನ್ನು ಬಾರಿಸಿದ್ದರು.

**ತಂಡವನ್ನು ಚಾಂಪಿಯನ್ ಮಾಡಿದ್ದ ಕೇನ್:** ಆಟಗಾರನಾಗಿ ಮಾತ್ರವಲ್ಲದೆ ವಿಲಿಯಮ್ಸನ್, 2016 ರಿಂದ 2024 ರವರೆಗೆ ಕಿವೀಸ್ ತಂಡದ ನಾಯಕತ್ವ ವಹಿಸಿದ್ದರು. ಅವರ ನಾಯಕತ್ವದಲ್ಲಿ ನ್ಯೂಜಿಲೆಂಡ್, ಭಾರತವನ್ನು ಸೋಲಿಸಿ 2021 ರಲ್ಲಿ ಚೊಚ್ಚಲ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಗೆದ್ದಿತು. ಇದರ ಜೊತೆಗೆ ಕೇನ್, ತಂಡವನ್ನು 2019 ರ ಏಕದಿನ ವಿಶ್ವಕಪ್ ಮತ್ತು 2021 ರ ಟಿ20 ವಿಶ್ವಕಪ್‌ನ ಫೈನಲ್‌ಗೂ ಮುನ್ನಡೆಸಿದ್ದರು. ಹಾಗೆಯೇ 2019 ರ ಏಕದಿನ ವಿಶ್ವಕಪ್‌ನಲ್ಲಿ ಟೂರ್ನಮೆಂಟ್ ಆಟಗಾರ ಪ್ರಶಸ್ತಿ ಗೆದ್ದಿದ್ದ ಕೇನ್, 2019 ರಲ್ಲಿ ಐಸಿಸಿ ವರ್ಷದ ಟೆಸ್ಟ್ ಆಟಗಾರ ಪ್ರಶಸ್ತಿಯನ್ನು ಸಹ ಪಡೆದುಕೊಂಡಿದ್ದರು.

# ಎಐ ಬಳಸಿ ಯುವತಿಯ ಅಶ್ಲೀಲ ವಿಡಿಯೋ, ಹಣಕ್ಕೆ ಡಿಮ್ಯಾಂಡ್: ಇಬ್ಬರು ಆರೋಪಿಗಳು ವಶಕ್ಕೆ





**ಚಿಕ್ಕಮಗಳೂರು:** ಯುವತಿಯೋರ್ವಳ ಫೋಟೋ ವನ್ನು ಪೇಸ್ ಬುಕ್‌ನಿಂದ ಪಡೆದು ಅದನ್ನು ಬಳಸಿ ಅಶ್ಲೀಲ ವಿಡಿಯೋ ಕ್ರಿಯೇಟ್ ಮಾಡಿ ಹಣಕ್ಕೆ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದ ಆರೋಪಿಗಳನ್ನು ಪೊಲೀಸರು ಬಂಧಿಸಿರುವ ಘಟನೆ ಚಿಕ್ಕಮಗಳೂ–ರಿನಲ್ಲಿನಡೆದಿದೆ. ಂಖ, ವಿಡಿಯೋ ಎಡಿಟಿಂಗ್ ಅಪ್ಲಿಕೇಶನ್ ಬಳಸಿ ಮಾಡಿದ ವಿಡಿಯೋವನ್ನು ಯುವತಿಯ ತಾಯಿಗೆ ಕಳುಹಿಸಿದ್ದ ಆರೋಪಿಗಳು, ದುಡ್ಡಿಗಾಗಿ ಪೀಡಿಸಿದ್ದರು. ಹಣ ನೀಡದಿದ್ದರೆ ಜಾಲತಾಣದಲ್ಲಿ ವಿಡಿಯೋ ಹಾಕುವುದಾಗಿ ಬೆದರಿಕೆ ಹಾಕಿದ್ದರು. ನೊಂದ ಯುವತಿಯ ಕಡೆಯವರು ಲಕ್ಕವಳ್ಳಿ ಪೊಲೀಸರಿಗೆ ನೀಡಿದ್ದ ದೂರಿನ ಅಧಾರದಲ್ಲಿ ಬೆಂಗಳೂರಿನಲ್ಲಿ ಕೆಲಸ ಮಾಡಿ ಕೊಂಡಿದ್ದ ಅಕ್ಷಯ್ ಹಾಗೂ ಸಾಹುಲ್ ಎಂಬವರನ್ನು ಅರೆಸ್ಟ್ ಮಾಡಲಾಗಿದೆ.

**ಯೋಗೇಶ್ ಎಂಬ ಹೆಸರಲ್ಲಿ ಬ್ಲ್ಯಾಕ್‌ಮೇಲ್:** ಬಾವಿಕೆರೆ ಗ್ರಾಮದ 25 ವರ್ಷದ ಯುವತಿಯ ಫೋಟೋವನ್ನ ಫೇಸ್ಬುಕ್‌ನಿಂದ ಪಡೆದುಕೊಂಡಿದ್ದ ಆರೋಪಿಗಳು ಅಶ್ಲೀಲ ವಿಡಿಯೋ ಕ್ರಿಯೇಟ್ ಮಾಡಿದ್ದರು. ಆ ಬಳಿಕ ಯುವತಿಯ ತಾಯಿಗೆ ಬೆಂಗಳೂರು ಮೂಲದ ಯೋಗೇಶ್ ಎಂಬ ಹೆಸ–ರಿನಲ್ಲಿ ಪದೇಪದೇ ಕರೆ ಮಾಡಿ ಹಣ ಕೇಳಿದ್ದರು. ಆರೋಪಿಗಳು ನಿರಂತರ ಬ್ಲ್ಯಾಕ್‌ಮೇಲ್ ಮಾಡಲಾರಂಭಿಸಿದಾಗ ಯುವತಿ ಕಡೆಯವರು ಈ ಸಂಬಂಧ ಯೋಗೇಶ್ ಎಂಬ ಹೆಸರನ್ನೇ ಉಲ್ಲೇಖಿಸಿ ದೂರು ನೀಡಿದ್ದರು. ಆದರೆ ಪೊಲೀಸ್ ತನಿಖೆ ವೇಳೆ ಆರೋಪಿಗಳ ಕಳ್ಳಾಟ ಬಯಲಾಗಿದ್ದು, ಹಣಕ್ಕಾಗಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದ ಅಸಲಿ ಆರೋಪಿಗಳು ಅದೇ ಬಾವಿಕೆರೆ ಗ್ರಾಮದ ಸಾಹುಲ್ ಮತ್ತು ಅಕ್ಷಯ್ ಎಂಬುದು ಗೊತ್ತಾಗಿದೆ.

ಇನ್ನು ಆರೋಪಿಗಳು ಮೈತುಂಬ ಸಾಲಮಾಡಿಕೊಂಡಿದ್ದರು. ಹೀಗಾಗಿ ಹೇಗಾದರೂ ಹಣ ಮಾಡಬೇಕೆಂಬ ಆಸೆಗೆ ಬಿದ್ದು ಈ ರೀತಿಯ ಕೆಲಸಕ್ಕೆ ಕೈಹಾಕಿದ್ದರು. ಈ ವಿಚಾರವನ್ನು ಆರೋಪಿಗಳು ಪೊಲೀಸರ ಮುಂದೆ ಒಪ್ಪಿಕೊಂಡಿದ್ದು, ಮಾಡಬಾರದ್ದು ಮಾಡಲು ಹೋದವರೀಗ ಜೈಲು ಸೇರಿದ್ದಾರೆ. ಒಳ್ಳೆ ಕೆಲಸಗಳಿಗೆ ಬಳಕೆಯಾಗಬೇಕಿದ್ದ ತಂತ್ರಜ್ಞಾನವನ್ನು ಇಂತಹ ಕೆಟ್ಟ ಕೆಲಸಕ್ಕೆ ಬಳಕೆ ಮಾಡಿಕೊಂಡು ಹಣ ಮಾಡಲು ಹೋದವರೀಗ ತಕ್ಕ ಶಾಸ್ತಿಯಾಗಿದೆ ಎಂಬ ಮಾತುಗಳು ಗ್ರಾಮದಲ್ಲಿ ಕೇಳಿಬಂದಿವೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ:
9535786812\8217606793